ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 19-01-2016

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | ಕರ್ನಾಟಕ ಲಲಿತ ಕಲಾ ಅಕಾಡೆಮಿಯಿಂದ ತಿಂಗಳ ಚಿತ್ರ ಯುವ ಕಲಾವಿದರ ಕೃತಿಗಳ ಪ್ರತಿ ತಿಂಗಳ ಪ್ರದರ್ಶನ<br><br>ಉದ್ಘಾಟನೆ:<br><br>ಶ್ರೀ ಆರ್.ಜಿ. ಹಳ್ಳಿ ನಾಗರಾಜ್,<br>ಖ್ಯಾತ ಬರಹಗಾರರು<br><br>ಅಧ್ಯಕ್ಷತೆ:<br><br>ಡಾ: ಎಂ.ಎಸ್. ಮೂರ್ತಿ,<br>ಅಧ್ಯಕ್ಷರು,<br>ಕರ್ನಾಟಕ ಲಲಿತಕಲಾ ಅಕಾಡೆಮಿ | 20-1-2016<br>ಬುಧವಾರ<br>ಬೆಳಗ್ಗೆ<br>11-00 ಗಂಟೆಗೆ | ವರ್ಣ ಗ್ಯಾಲರಿ,<br>2ನೇ ಮಹಡಿ, ಕನ್ನಡ ಭವನ,<br>ಜೆ.ಸಿ. ರಸ್ತೆ,<br>ಬೆಂಗಳೂರು -560 002 |

ನಿರ್ದೇಶಕರ ಪರವಾಗಿ

# ಪತ್ರಿಕಾ ಪ್ರಕಟಣೆ

## ಸಚಿವ ಸಂಪುಟದ ಸಭೆ ಮುಂದೂಡಿಕೆ

**<u>ಬೆಂಗಳೂರು, ಜನವರಿ 18 ( ಕರ್ನಾಟಕ ವಾರ್ತೆ )</u> :**

**ರಾಜ್ಯ ಸಚಿವ ಸಂಪುಟದ ಸಭೆಯು ಜನವರಿ 20 ರ ಬುಧವಾರ ಬೆಳಿಗ್ಗೆ 11-00 ಗಂಟೆಗೆ ವಿಧಾನ ಸೌಧ ಮೂರನೇ ಮಹಡಿಯಲ್ಲಿರುವ ಸಚಿವ ಸಂಪುಟದ ಸಭಾ ಮಂದಿರದಲ್ಲಿ ನಡೆಯಬೇಕಿದ್ದ ಸಭೆಯನ್ನು ಮೂಂದೂಡಲಾಗಿದೆ.**

**ಬಾಬು/ಕೆಎಂ**

# 8ನೇ ಬೆಂಗಳೂರು ಅಂತರರಾಷ್ಟ್ರೀಯ ಚಲನಚಿತ್ರೋತ್ಸವ: ಸಮಾರೋಪ ದಿನಾಂಕ ಬದಲು

**<u>ಬೆಂಗಳೂರು, ಜನವರಿ 19 ( ಕರ್ನಾಟಕ ವಾರ್ತೆ )</u> :**

8ನೇ ಬೆಂಗಳೂರು ಅಂತರರಾಷ್ಟ್ರೀಯ ಚಲನಚಿತ್ರ್ರೋತ್ಸವದ ಸಮಾರೋಪ ಸಮಾರಂಭವು ಫೆಬ್ರವರಿ 4 ಕ್ಕೆ ಬದಲಾಗಿ ಫೆಬ್ರವರಿ 5 ರಂದು ಸಂಜೆ 5.00 ಗಂಟೆಗೆ ಮೈಸೂರು ಅರಮನೆ ಮುಂಭಾಗದಲ್ಲಿ ನಡೆಯಲಿದೆ. ಸನ್ಮಾನ್ಯ ರಾಜ್ಯಪಾಲರನ್ನು ಪ್ರಶಸ್ತಿ ವಿತರಣೆಗೆ ಆಹ್ವಾನಿಸಲಾಗಿದೆ. ಮುಖ್ಯಮಂತ್ರಿ ಶ್ರೀ ಸಿದ್ಧರಾಮಯ್ಯ ಅವರು ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸುವರು.

ಸಮಾರೋಪ ಸಮಾರಂಭವು ಸಾಂಸ್ಕೃತಿಕ ಕಾರ್ಯಕ್ರಮವನ್ನು ಒಳಗೊಂಡಿರುತ್ತದೆ. ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಯು ಅಂದು ಕನ್ನಡ ಚಿತ್ರೋದ್ಯಮಕ್ಕೆ ರಜೆ ಘೋಷಣೆ ಮಾಡಿದೆ. ಕನ್ನಡ ಚಿತ್ರರಂಗದ ಖ್ಯಾತ ನಟ/ನಟಿಯರು ಸಾಂಸ್ಕೃತಿಕ ಕಾರ್ಯಕ್ರಮ ನೀಡುವರು ಎಂದು ಕರ್ನಾಟಕ ಚಲನಚಿತ್ರ ಅಕಾಡೆಮಿ ರಿಜಿಸ್ಟ್ರಾರ್ ಹಾಗೂ ಚಲನಚಿತ್ರ್ರೋತ್ಸವ ಸಂಘಟನಾ ಸಮಿತಿಯ ಸದಸ್ಯ ಕಾರ್ಯದರ್ಶಿ ಶ್ರೀ ಹೆಚ್. ಬಿ. ದಿನೇಶ್ ಅವರು ತಿಳಿಸಿದ್ದಾರೆ.

ಹೆಚ್‌ಬಿಡಿ/ಬಾಬು/ಕೆಎಂ

# <u>ಜ. 30 ರ ಹುತ್ಮಾತರ ದಿನ :</u>

# <u>ಮೌನ ಆಚರಣೆಗೆ ಸ್ಥಾಯಿ ಸೂಚನೆಗಳು</u>

ಬೆಂಗಳೂರು, ಜನವರಿ 19 (ಕರ್ನಾಟಕ ವಾರ್ತೆ)

ಭಾರತ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಪ್ರಾಣತೆತ್ತು ಹುತಾತ್ಮರಾದವರ ಸ್ಮರಣಾರ್ಥವಾಗಿ ಪ್ರತಿವರ್ಷ ಜನವರಿ 30 ರಂದು ಪೂರ್ವಾಹ್ನ 11–00 ಗಂಟೆಗೆ ಎಲ್ಲಾ ಕೆಲಸ ಕಾರ್ಯಗಳನ್ನು ಸ್ಥಗಿತಗೊಳಿಸಿ ಮೌನ ಆಚರಿಸುವಾಗ ಅನುಸರಿಸಬೇಕಾದ ಕ್ರಮಗಳ ಬಗ್ಗೆ ಪ್ರತಿ ವರ್ಷವೂ ರಾಜ್ಯ ಸರ್ಕಾರದಿಂದ ಸೂಚನೆಗಳನ್ನು ನೀಡಲಾಗುತ್ತಿದೆ. ಹುತಾತ್ಮರ ಸ್ಮರಣಾರ್ಥವಾಗಿ ಜನವರಿ 30 ರಂದು ನಡೆಸುವ ಮೌನಾಚರಣೆಗೆ ಭಾರತ ಸರ್ಕಾರದ ಸೂಚನೆಗಳಂತೆ ಸ್ಥಾಯಿ ಸೂಚನೆಗಳನ್ನು ನೀಡಲಾಗಿದೆ.

ಜನವರಿ 30 ರಂದು ಪೂರ್ವಾಹ್ನ 11.00 ಗಂಟೆಗೆ ರಾಜ್ಯದೆಲ್ಲೆಡೆ ಎಲ್ಲಾ ಕೆಲಸ ಕಾರ್ಯಗಳನ್ನು ಮತ್ತು ಚಲನೆಯನ್ನು ಸ್ಥಗಿತಗೊಳಿಸಿ 2 ನಿಮಿಷಕಾಲ ಮೌನ ಆಚರಿಸುವುದು.

ಎಲ್ಲಿ ಸೈರನ್‌ಗಳು ಅಥವಾ ಸೈನಿಕರ ಬಂದೂಕುಗಳು ಲಭ್ಯವಿವೆಯೋ ಅಂತಹ ಕಡೆಗೆ ಎರಡು ನಿಮಿಷ ಮೌನ ಆಚರಣೆಯ ಕಾಲವನ್ನು ಪ್ರಾರಂಭ ಮತ್ತು ಮುಕ್ತಾಯಕ್ಕೆ ಸೈರನ್ ಅಥವಾ ಸೈನಿಕರ ಬಂದೂಕುಗಳ ಶಬ್ದದ ಮೂಲಕ ಎರಡು ನಿಮಿಷ ಮೌನ ಆಚರಣೆ ಮಾಡುವುದು. ಪೂರ್ವಾಹ್ನ 10.59 ರಿಂದ 11.00 ಗಂಟೆಯವರೆಗೆ ಸೈರನ್ ಬಂದೂಕು ಶಬ್ಧಮಾಡಿಸುವುದು ಹಾಗೂ ಎರಡು ನಿಮಿಷದ ಮೌನ ಆಚರಣೆಯ ನಂತರ ಪುನ: 11.02 ರಿಂದ 11.03 ನಿಮಿಷದವರೆಗೆ ಸೈರನ್/ಬಂದೂಕು ಶಬ್ಧವನ್ನು ಮಾಡಿಸುವುದು. ಈ ಪದ್ಧತಿಯನ್ನು ಸೈರನ್/ಬಂದೂಕು ಸೌಲಭ್ಯವಿರುವ ಕಡೆ ಅಳವಡಿಸಿಕೊಳ್ಳುವುದು.

ಶಬ್ದವು (ಎಲ್ಲಿ ಲಭ್ಯ ಇದೆಯೋ ಅಲ್ಲಿ) ಕೇಳಿದ ಕೂಡಲೇ ಅಲ್ಲಿ ವ್ಯಕ್ತಿಗಳು ಆರಂಭದ ಸೂಚನೆಗಾಗಿ, ನಿಂತುಕೊಳ್ಳಬೇಕು ಮತ್ತು ಮೌನವನ್ನು ಆಚರಿಸಬೇಕು. ಪ್ರತಿಯೊಬ್ಬ ವ್ಯಕ್ತಿಯು ತನ್ನ ಕೊಠಡಿಯಲ್ಲಿ ಅಥವಾ ಇತರೆ ಯಾವುದೇ ಸ್ಥಳದಲ್ಲಿ ನಿಂತುಕೊಂಡು ಮೌನ ಆಚರಿಸುವುದಕ್ಕಿಂತ ಒಂದೇ ವೇಳೆಗೆ ವ್ಯಕ್ತಿಗಳು ಒಂದು ಸ್ಥಳದಲ್ಲಿ ಸೇರಿ ಮೌನ ಆಚರಿಸಿದರೆ ಅದು ತುಂಬಾ ಪರಿಣಾಮಕಾರಿ ಮತ್ತು ಪ್ರಭಾವಶಾಲಿ (effective and impressive) ಆಗುತ್ತದೆ. ಆದಾಗ್ಯೂ ಇದು ಕೆಲಸ ಕಾರ್ಯಗಳಿಗೆ ತೀವ್ರ ತೊಂದರೆ ಆಗುವಂತಿದ್ದರೆ ಮೇಲೆ ತಿಳಿಸಿದಂತೆ ಒಂದೇ ಸ್ಥಳದಲ್ಲಿ ಸೇರಲು ಪ್ರಯತ್ನಿಸದೇ ಇರಬಹುದು. ಈ 2 ನಿಮಿಷಗಳಲ್ಲಿ ಎಲ್ಲಾ ವರ್ಕ್‌ಶಾಪ್‌ಗಳು ಮತ್ತು ಕಾರ್ಖಾನೆಗಳು ಕೆಲಸ ಸ್ಥಗಿತಗೊಳಿಸಬೇಕು. ಈ 2 ನಿಮಿಷದ ಅವಧಿಯಲ್ಲಿ ವರ್ಕ್‌ಶಾಪ್‌ಗಳು ಮತ್ತು ಕಾರ್ಖಾನೆಗಳು ಶಬ್ದ ಪ್ರಸಾರ ಮಾಡುವುದನ್ನು ನಿಲ್ಲಿಸಬೇಕು ಮತ್ತು ರಸ್ತೆಗಳಲ್ಲಿ ಸಂಚಾರ ಸ್ಥಗಿತಗೊಳಿಸಬೇಕು. ವಿಮಾನಗಳು, ಹಡಗುಗಳು, ರೈಲುಗಳು ಹೊರಡಲು ಬೆಳಿಗ್ಗೆ 11.00 ಗಂಟೆಯೆಂದು ನಿಗದಿಪಡಿಸಿದ್ದಲ್ಲಿ ಅಂತಹವುಗಳನ್ನು ಆಯಾ ನಿಲ್ದಾಣಗಳಲ್ಲಿ 2 ನಿಮಿಷಗಳ ಕಾಲ ತಡೆ ಹಿಡಿಯಬೇಕು.

ಸಂಕೇತ (Signal) ವ್ಯವಸ್ಥೆ ಇರದಂತಹ ಪ್ರದೇಶದಲ್ಲಿ ಬೆಳಿಗ್ಗೆ 11.00 ಗಂಟೆಗೆ 2 ನಿಮಿಷಗಳ ಮೌನ ಆಚರಿಸಲು ಸಂಬಂಧಪಟ್ಟವರಿಗೆಲ್ಲ ಸೂಕ್ತ ನಿರ್ದೇಶನವನ್ನು ಕಳುಹಿಸುವುದು.

ಇಲಾಖಾ ಮುಖ್ಯಸ್ಥರು ಮತ್ತು ಜಿಲ್ಲಧಿಕಾರಿಗಳು ವಿವರವಾದ ಕಾರ್ಯಕ್ರಮಗಳನ್ನು ರೂಪಿಸುವ ಸಂಪೂರ್ಣ ಜವಾಬ್ದಾರಿಯುಳ್ಳವರಾಗಿರುತ್ತಾರೆ. ಬೆಳಿಗ್ಗೆ 10.44 ರಿಂದ 10.56 ಗಂಟೆವರೆಗೆ (1) "ಸುಮಿರನ ಕರಲೆ ಮೇರೆ ಮನ್" 2) ವೈಷ್ಣವೋ ಜನತೋ ತೇನೇ ಕಹಿಯೇ" ಮತ್ತು (3) "ರಘುಪತಿ ರಾಘವ ರಾಜಾರಾಂ" ಈ ಕ್ರಮದಲ್ಲಿ 3 ಭಜನೆಗಳನ್ನು ಹಾಡಬೇಕು ಮತ್ತು ಈ ಕಾರ್ಯಕ್ರಮವು ಸಮಾರಂಭದ ಭಾಗ ಆಗಬಹುದು.

ಶಬ್ಧ ಮಾಡುವ ಬಗ್ಗೆ ಬಂದೂಕು ಹೊಡೆಯುವುದರಿಂದ ಅಥವಾ ಸೈರನ್‌ಗಳನ್ನು ಬೆಂಗಳೂರಿನಲ್ಲಿ ಮತ್ತು ಜಿಲ್ಲಾ ಕೇಂದ್ರಗಳಲ್ಲಿ ಮತ್ತು ಇತರೆ ನಗರ/ಪಟ್ಟಣಗಳಲ್ಲಿ ಸಾಧ್ಯವಾದಷ್ಟು ಮಟ್ಟಿಗೆ ಸೂಕ್ತ ವ್ಯವಸ್ಥೆಗಳನ್ನು ಮಾಡಲು ಕರ್ನಾಟಕ ರಾಜ್ಯದ ಆರಕ್ಷಕ ಮಹಾನಿರೀಕ್ಷಕರು ಕ್ರಮ ತೆಗೆದುಕೊಳ್ಳುವರು.

ಕೆಲವು ಕಚೇರಿಗಳಲ್ಲಿ ಈ 2 ನಿಮಿಷಗಳ ಮೌನ ಆಚರಣೆಯನ್ನು ಮಾಡುತ್ತಿರುವಾಗ ಸಾಮಾನ್ಯ ಜನತೆ ಈ ಮೌನ ಆಚರಣೆ ಸಂದರ್ಭದ ಪಾವಿತ್ರ್ಯತೆಯನ್ನು ಗಮನದಲ್ಲಿ ಇಡದೇ ತನ್ನ ಕಾರ್ಯದಲ್ಲಿ ನಿರತವಾಗುವುದನ್ನು ಗಮನಿಸಲಾಗಿದೆ. ಆದುದರಿಂದ ಹುತಾತ್ಮರ ದಿನಾಚರಣೆಯನ್ನು ಸೂಕ್ತವಾಗಿ ಸಲ್ಲಿಸಬೇಕಾದ ಪ್ರಾವಿತ್ರ್ಯತೆಯನ್ನು ಆಚರಿಸಬೇಕಾಗಿರುವುದರಿಂದ ಸಾಮಾನ್ಯ ಜನತೆಯೂ ಭಾಗವಹಿಸುವುದರೊಡನೆ ಈ ಹುತಾತ್ಮರ ದಿನಾಚರಣೆಯನ್ನು ತಪ್ಪದೇ ಆಚರಿಸಬೇಕಾಗಿರುವ ಎಲ್ಲಾ ಕಾರ್ಯಕ್ರಮಗಳನ್ನು ಕೈಗೊಳ್ಳಬೇಕೆಂದೇ ಸಂಬಂಧಪಟ್ಟ ಎಲ್ಲಾ ಪ್ರಾಧಿಕಾರಿಗಳಿಗೆ ರಾಜ್ಯ ಸರ್ಕಾರದಿಂದ ಸೂಚಿಸಲಾಗಿದೆ. ಈ ಉದ್ದೇಶಕ್ಕಾಗಿ ಕೆಳಕಾಣಿಸಿದ ಕ್ರಮಗಳನ್ನು ಕೈಗೊಳ್ಳಬೇಕೆಂದು ಕೋರಲಾಗಿದೆ.

ಹುತಾತ್ಮರ ದಿನವನ್ನುಪೂರ್ಣ ಪ್ರಾವಿತ್ರ್ಯತೆ ಮತ್ತು ಯೋಗ್ಯ (befitting) ರೀತಿಯಲ್ಲಿ ಆಚರಿಸಲು ರಾಜ್ಯದ ಎಲ್ಲಾ ವಿದ್ಯಾ ಸಂಸ್ಥೆಗಳಿಗೆ ಸೂಚನೆಗಳನ್ನು ನೀಡುವುದು. ಈ ದಿನದ ವಿಶೇಷತ್ವಕ್ಕೆ ಸಂಬಂಧಿಸಿದಂತೆ ಭಾಷಣಗಳನ್ನು ಆದರಲ್ಲೂ ವಿಶೇಷವಾಗಿ ಭಾರತದ ಸ್ವಾತಂತ್ರ್ಯದಲ್ಲಿ ಸ್ವಾತಂತ್ರ್ಯ ಹೋರಾಟಗಾರರ ಪಾತ್ರವನ್ನು ತಿಳಿಸುವಂತಹ ಭಾಷಣ/ಚರ್ಚೆಗಳನ್ನು ಏರ್ಪಡಿಸಬೇಕು. ಈ ಭಾಷಣಗಳ ಮುಖ್ಯಾಂಶಗಳಲ್ಲಿ ಕಷ್ಟಪಟ್ಟು ಗಳಿಸಿದ ಸ್ವಾತಂತ್ರ್ಯವನ್ನು ಉಳಿಸುವುದು. ಸಂರಕ್ಷಿಸುವುದು ಮತ್ತು ಶ್ರೀಮಂತಗೊಳಿಸುವುದಲ್ಲದೆ. ರಾಷ್ಟ್ರದ ಐಕ್ಯತೆಯನ್ನು ಉತ್ತೇಜಿಸುವುದು ಮತ್ತು ಒಂದೇ ಗುರಿಗಳು ಮತ್ತು ಆದರ್ಶಗಳಿಗೆ ಬದ್ಧರಾಗುವ ಅಂಶಗಳನ್ನೊಳಗೊಂಡಿರಬೇಕು.

ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ಹುತಾತ್ಮರಾದವರ ಪಾತ್ರ ಮತ್ತು ರಾಷ್ಟ್ರೀಯ ಐಕ್ಯತೆಯ (National Integration) ಮೂಲ ಉದ್ದೇಶಗಳು ಇರುವ ಸಾಂಸ್ಕೃತಿಕ ಕಾರ್ಯಕ್ರಮಗಳ/ಡಾಕ್ಯುಮಂಟರಿ ಚಿತ್ರಗಳ ಪ್ರದರ್ಶನಗಳ ಏರ್ಪಾಡುಗಳನ್ನು ರಾಜ್ಯದ ಪ್ರಚಾರ ಘಟಕಗಳು ಮಾಡಬಹುದು.

ಸದಸ್ಯರು ಹಾಗೂ ಸಂಯೋಜಿತ ಸಂಘ ಮತ್ತು ಸಂಸ್ಥೆಗಳು ಹುತಾತ್ಮರ ದಿನಾಚರಣೆಯನ್ನು ಸೂಕ್ತವಾಗಿ ಆಚರಿಸಬೇಕೆಂಬುದರ ಕುರಿತು ವಿವಿಧ ವಾಣಿಜ್ಯ ಮತ್ತು ಕೈಗಾರಿಕಾ ಮಹಾಮಂಡಳಿಗಳನ್ನು (Chamber of Commerce and Industries ) ಕೋರಬಹುದು.

ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳು, ಕಾರ್ಯದರ್ಶಿಗಳು, ಎಲ್ಲಾ ಪ್ರಾದೇಶಿಕ ಆಯುಕ್ತರು, ಇಲಾಖಾ ಮುಖ್ಯಸ್ಥರು, ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಮತ್ತಿತರ ಸಂಬಂಧಪಟ್ಟ ಅಧಿಕಾರಿಗಳು ಸೂಚಿಸಿರುವ ನಿರ್ದೇಶನಗಳನ್ನು ಅನುಸರಿಸಲು ಸೂಕ್ತಕ್ರಮ ಕೈಗೊಳ್ಳಬೇಕೆಂದು ರಾಜ್ಯ ಸರ್ಕಾರವು ಸೂಚಿಸಿದೆ.

ಬಾಬು:ಜಿಪಿಆರ್.